**All India Radio: Bangalore**
**Regional Bulletin In Kannada**
**05.01.2026 / 6.40 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**05.01.2026 / 6.40 p.m.**
*******************

ಮುಖ್ಯಾಂಶಗಳು

೧. ಕುಂಬಾರ ಸಮಾಜದ ಅಭಿವೃದ್ಧಿಗೆ ಸರ್ಕಾರ ಬದ್ಧ- ಮುಖ್ಯಮಂತ್ರಿ ಸಿದ್ದರಾಮಯ್ಯ

೨. ವಿಶ್ವ ಪಾರಂಪರಿಕ ತಾಣ ಹಂಪಿಯ ಐತಿಹಾಸಿಕ ಸ್ಮಾರಕಗಳ ಪರಿಶೀಲನೆ ನಡೆಸಿದ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೇಖಾವತ್

೩. ರಾಜ್ಯದ ಅರಣ್ಯ ಪ್ರದೇಶದಲ್ಲಿ ಹುಲಿ ಸೇರಿದಂತೆ ಮಾಂಸಾಹಾರಿ ಪ್ರಾಣಿಗಳ ಗಣತಿ ಪ್ರಕ್ರಿಯೆ ಆರಂಭ

೪. ವಿಮಾನ ನಿಲ್ದಾಣ ರನ್ ವೇ ಸ್ವಚ್ಛತಾ ವಾಹನ ಎನ್.ಎ.ಎಲ್ ಗೆ ಹಸ್ತಾಂತರಿಸಿದ ಸಚಿವ ಎಂ.ಬಿ.ಪಾಟೀಲ್

೫. ಬೆಂಗಳೂರು ಓಪನ್ ಟೆನಿಸ್ ಟೂರ್ನಿ; ಕ್ರೊಯೇಷಿಯಾ ದೋಡಿಗ್ ವಿರುದ್ಧ ಭಾರತದ ಮಾನಸ್ ದಮ್ನೆಗೆ ಗೆಲುವು

***************

ಶಿಕ್ಷಣವಿಲ್ಲದಿದ್ದರೆ ಸಮಾಜದಲ್ಲಿ ಮನುಷ್ಯರಾಗಿ, ಸ್ವಾಭಿಮಾನಿಗಳಾಗಿ ಬದುಕಲು ಸಾಧ್ಯವಿಲ್ಲ. ಬದಲಾವಣೆ ತರಬೇಕಾದರೆ ವಿದ್ಯಾವಂತರಾಗಲೇಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಮೈಸೂರಿನಲ್ಲಿ ನಡೆದ ರಾಜ್ಯ ಕುಂಬಾರರ ಮಹಾ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಜ್ಞಾನದ ಬೆಳಕು ನೀಡಿದ ಕವಿ ಸರ್ವಜ್ಞರು, ಈ ಸಮುದಾಯಕ್ಕೆ ಸೇರಿರುವುದು ಹೆಮ್ಮೆಯ ವಿಷಯ ಎಂದು ಹೇಳಿದ್ದಾರೆ. ಕುಂಬಾರ ಸಮಾಜದ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಅವರು, ಕುಂಬಾರ ಅಭಿವೃದ್ಧಿ ನಿಗಮಕ್ಕೆ ಸೂಕ್ತ ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ.

***************

ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಖಾತೆ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ರಾಜ್ಯ ಪ್ರವಾಸ ಕೈಗೊಂಡಿದ್ದಾರೆ. ಇಂದು ಯುನೆಸ್ಕೊ ವಿಶ್ವ ಪಾರಂಪರಿಕ ತಾಣ ಹಂಪಿಗೆ ಭೇಟಿ ನೀಡಿ, ವಿವಿಧ ಐತಿಹಾಸಿಕ ಸ್ಥಳಗಳನ್ನು ವೀಕ್ಷಿಸಿದರು.

ಮಹಾನವಮಿ ದಿಬ್ಬ, ಹಜಾರರಾಮ ದೇವಸ್ಥಾನ, ಆನೆ ಮತ್ತು ಕುದುರೆ ಲಾಯ, ಲೋಟಸ್ ಮಹಲ್ ಸೇರಿದಂತೆ ಪ್ರಮುಖ ಸ್ಮಾರಕಗಳ ಪರಿಶೀಲನೆ ನಡೆಸಿದರು. ಹಂಪಿಯ ಪಾರಂಪರಿಕ ಸೊಬಗನ್ನು ಕಂಡು ಸಂತಸ ವ್ಯಕ್ತಪಡಿಸಿದ್ದಾರೆ.

ಬಳಿಕ ಅವರು, ಹಂಪಿಯ ಶ್ರೀ ವಿರೂಪಾಕ್ಷೇಶ್ವರ ದೇವರ ದರ್ಶನ ಪಡೆಯಲಿದ್ದಾರೆ.

***************

ಕಾಳಿ, ಭದ್ರಾ, ನಾಗರಹೊಳೆ, ಬಂಡೀಪುರ, ಬಿ.ಆರ್.ಟಿ. ಹುಲಿ ಸಂರಕ್ಷಿತ ಧಾಮ ಸೇರಿದಂತೆ ರಾಜ್ಯದ ಎಲ್ಲ ಅರಣ್ಯ ಪ್ರದೇಶದಲ್ಲಿ ಹುಲಿ ಹಾಗೂ ಮಾಂಸಹಾರಿ ಪ್ರಾಣಿಗಳ ಗಣತಿ ಪ್ರಕ್ರಿಯೆ ಆರಂಭವಾಗಲಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಭಾಲ್ಕಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅರಣ್ಯ ಪ್ರದೇಶಗಳ ಪ್ರತಿ ವಲಯದಲ್ಲಿರುವ ಎಲ್ಲ ೩೮ ಅರಣ್ಯ ವಿಭಾಗದ ಗಸ್ತುಗಳಲ್ಲಿ ಈ ಪ್ರಕ್ರಿಯೆ ನಡೆಯಲಿದೆ.

ಇಂದಿನಿಂದ ೩ ದಿನಗಳ ಕಾಲ ರಾಜ್ಯದ ಎಲ್ಲ ಗಸ್ತಿನಲ್ಲಿ ೩ ಜನರ ತಂಡ ಪ್ರತಿ ನಿತ್ಯ ೫ ಕಿಲೋಮೀಟರ್ ಕಾಡಿನಲ್ಲಿ ಸಂಚರಿಸಿ ಹುಲಿ, ಚಿರತೆ ಸೇರಿದಂತೆ ಎಲ್ಲ ಮಾಂಸಹಾರಿ ಪ್ರಾಣಿಗಳ ಮತ್ತು ಆನೆಯ ಕಾಲುಗುರುತು, ಲದ್ದಿ, ಪ್ರತ್ಯಕ್ಷ ದರ್ಶನ ಇತ್ಯಾದಿ ವಿವರ ಕಲೆ ಹಾಕಲಿವೆ. ಬಳಿಕ ಇದೇ ೧೫ರಿಂದ ೧೭ರವರೆಗೆ ೧೪ ಅರಣ್ಯ ವಿಭಾಗದಲ್ಲಿ ೨ನೇ ಹಂತದ ಗಣತಿ ಅಂದಾಜು ನಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಇಂಜಿನಿಯರಿಂಗ್ ನಾವಿನ್ಯತೆ ಮತ್ತು ಅಧಿಕ ಮೌಲ್ಯದ ಮೂಲಸೌಕರ್ಯ ಉಪಕರಣಗಳ ತಯಾರಿಕೆಯಲ್ಲಿ ತೊಡಗಿರುವ ಬೆಂಗಳೂರಿನ ಅನ್‌ಲಾನ್ ಟೆಕ್ನಾಲಜಿ ಸೊಲ್ಯೂಷನ್ ಲಿಮಿಟೆಡ್ ಅಭಿವೃದ್ಧಿಪಡಿಸಿರುವ ವಿಮಾನ ನಿಲ್ದಾಣ ರನ್ ವೇ ಸ್ವಚ್ಛತಾ ವಾಹನವನ್ನು ಕೈಗಾರಿಕ ಸಚಿವ ಎಂ.ಬಿ.ಪಾಟೀಲ್ ಇಂದು ನೋಯ್ಡಾ ಇಂಟರ್ ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್‌ಗೆ ಹಸ್ತಾಂತರಿಸಿದರು.

ಭಾರತದಲ್ಲಿ ಇದೇ ಮೊದಲ ಬಾರಿಗೆ ದೇಶೀಯವಾಗಿ ತಯಾರಿಕೆಯಾದ ರನ್ ವೇ ಸ್ವಚ್ಛತಾ ವಾಹಹನ ಇದಾಗಿದೆ.

ಬಳಿಕ ಮಾತನಾಡಿದ ಸಚಿವ ಎಂ.ಬಿ.ಪಾಟೀಲ್, ಸ್ವಿಟ್ಜರ್ ಲ್ಯಾಂಡ್ ನ Bucher Municipal ಸಂಸ್ಥೆಯ ಸಹಯೋಗದಲ್ಲಿ ಜಾಗತಿಕ ತಂತ್ರಜ್ಞಾನದೊಂದಿಗೆ ವಿನ್ಯಾಸಗೊಳಿಸಿ, ತಯಾರಿಸಲಾದ ಈ ಆಧುನಿಕ ರನ್ ವೇ ಹಾಗೂ ಮ್ಯುನಿಸಿಪಲ್ ಸ್ವೀಪರ್ ಗಳು, ಲೋಹದ ತುಣುಕುಗಳು ಸೇರಿದಂತೆ, ಸಸ್ಯಸಂಬಂಧಿ ಕಸ ಮತ್ತು ಸ್ಕಿಡ್ ಗೆ ಕಾರಣವಾಗುವ ಅಂಶಗಳನ್ನು ತೆರವುಗೊಳಿಸಲಿದೆ.

ನಿಖರ ಎಂಜಿನಿಯರಿಂಗ್ ಮತ್ತು ಮೊಬೈಲಿಟಿ ಕ್ಷೇತ್ರದಲ್ಲಿ ರಾಜ್ಯ ನಿರ್ಮಿಸಿಕೊಂಡಿರುವ ಬಲಿಷ್ಠ ಪರಿಸರ ವ್ಯವಸ್ಥೆಯೇ ಇಂತಹ ಉನ್ನತ ಪ್ರಭಾವದ ತಯಾರಿಕಾ ಯಶಸ್ಸುಗಳಿಗೆ ಆಧಾರವಾಗಿದೆ ಎಂದು ಅವರು ತಿಳಿಸಿದ್ದಾರೆ.

***************

ಗ್ರಾಮೀಣ ಹಾಗೂ ನಗರ ಪ್ರದೇಶಗಳ ಜನರಿಗೆ ವಿಶ್ವಾಸಾರ್ಹ, ಸುರಕ್ಷಿತ ಮತ್ತು ಸುವ್ಯವಸ್ಥಿತ ರೈಲ್ವೆ ಸಂಪರ್ಕ ಒದಗಿಸುವುದು ಕೇಂದ್ರ ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ.

ಕೊಪ್ಪಳದ ಗಿಣಿಗೇರಾ - ಮುನಿರಾಬಾದ್ ರೈಲು ನಿಲ್ದಾಣಗಳ ನಡುವಿನ ರಸ್ತೆ ಮೇಲ್ಸೇತುವೆ ಕಾಮಗಾರಿಗೆ ಹಿಟ್ನಾಳದಲ್ಲಿ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಈ ಸೇತುವೆಯಿಂದ ಅಪಘಾತಗಳ ಪ್ರಮಾಣ ಗಣನೀಯವಾಗಿ ಕಡಿಮೆಯಾಗಲಿದೆ ಎಂದು ಹೇಳಿದ್ದಾರೆ.

ಹಿಟ್ನಾಳ ಸೇರಿದಂತೆ ಸುತ್ತಮುತ್ತಲ ಗ್ರಾಮಗಳ ಜನರಿಗೆ ಈ ರಸ್ತೆ ಮೇಲ್ಸೇತುವೆ ಮಹತ್ವದ ವರದಾನವಾಗಿದ್ದು, ಕೃಷಿ ಉತ್ಪನ್ನಗಳ ಸಾಗಣೆ, ಶಿಕ್ಷಣ, ಆರೋಗ್ಯ ಮತ್ತು ವ್ಯಾಪಾರ ಚಟುವಟಿಕೆಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

***************

ಆಧುನಿಕ ಜ್ಞಾನವನ್ನು ಮೌಲ್ಯಗಳೊಂದಿಗೆ ಸಂಯೋಜಿಸುವ ಶಿಕ್ಷಣ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ೧೦೬ನೇ ವಾರ್ಷಿಕ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡಲು ಯುವ ಶಕ್ತಿ ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ತಿಳಿಸಿದ್ದಾರೆ.

ಘಟಿಕೋತ್ಸವದಲ್ಲಿ ಸಚಿವ ಎಂ.ಸಿ. ಸುಧಾಕರ್, ಇಸ್ರೋ ಮಾಜಿ ಅಧ್ಯಕ್ಷ ಡಾ.ಸೋಮನಾಥ್, ಕುಲಪತಿ ಎನ್.ಕೆ.ಲೋಕನಾಥ್ ಮತ್ತು ಇತರ ಗಣ್ಯರು ಉಪಸ್ಥಿತರಿದ್ದರು.

***************

ಬೆಂಗಳೂರಿನ ಕೋಗಿಲು ಲೇಔಟ್‌ನಲ್ಲಿ ಅತಿಕ್ರಮಣ ಮಾಡಲು ಬಿಜೆಪಿ ನಾಯಕರು ಪ್ರಯತ್ನಿಸಿದ್ದಾರೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ಕೋಗಿಲು ಲೇಔಟ್‌ನಲ್ಲಿ ವಸತಿ ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸಲಾಗಿರುವುದು ನಿಜ. ಆದರೆ, ಅಲ್ಲಿನ ನಿವಾಸಿಗಳು ಬಡವರಾಗಿರುವುದರಿಂದ ಮಾನವೀಯತೆಯ ಹಿನ್ನೆಲೆಯಲ್ಲಿ ಈ ವಿಷಯ ಮುನ್ನೆಲೆಗೆ ಬಂದಿದೆ ಎಂದು ತಿಳಿಸಿದ್ದಾರೆ.

ಸರ್ಕಾರಿ ಭೂಮಿಯನ್ನು ಕಬಳಿಸಲು ಯೋಜಿತ ಪಿತೂರಿ ನಡೆಸಿದವರನ್ನು ಶಿಕ್ಷಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ. ಇದು ಬಿಬಿಎಂಪಿಗೆ ಸೇರದ ಭೂಮಿಯಾಗಿದ್ದು, ಅತಿಕ್ರಮಣಗಳನ್ನು ತೆರವುಗೊಳಿಸಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

***************

ಬೆಂಗಳೂರಿನಲ್ಲಿ ಬಾಂಗ್ಲಾದೇಶದ ವಲಸಿಗರಿದ್ದಾರೆ ಎಂದು ಬಿಜೆಪಿ ಯಾವ ಆಧಾರದ ಮೇಲೆ ಹೇಳುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಕ್ರಮ ವಲಸೆಯನ್ನು ತಡೆಯುವುದು ಕೇಂದ್ರ ಸರ್ಕಾರದ ಜವಾಬ್ದಾರಿಯಾಗಿದ್ದು, ಭಾರತಕ್ಕೆ ಹೇಗೆ ಪ್ರವೇಶಿಸುತ್ತಿದ್ದಾರೆ ಎಂದು ಕೇಳಿದ್ದಾರೆ.

ಅತಿಕ್ರಮಣದಾರರು ಬಾಂಗ್ಲಾದೇಶದವರಾಗಿದ್ದರೆ, ಇದು ಕೇಂದ್ರ ಸರ್ಕಾರದ ನಿರ್ಲಕ್ಷ್ಯಕ್ಕೆ ಹಿಡಿದ ಕೈಗನ್ನಡಿ ಎಂದು ಹೇಳಿದ್ದಾರೆ.

***************

ದಾವಣಗೆರೆಯಲ್ಲಿಂದು ನೂತನ ಆಧಾರ್ ಸೇವಾ ಕೇಂದ್ರವನ್ನು ಹೆಚ್ಚುವರಿ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಆಧಾರ್ ನ್ಯೂನ್ಯತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸೇವಾ ಕೇಂದ್ರ ಸಾರ್ವಜನಿಕರಿಗೆ ಸಹಕಾರಿಯಾಗಲಿದೆ ಎಂದು ಹೇಳಿದರು.

ಆಧಾರ್ ಪ್ರಾದೇಶಿಕ ಕೇಂದ್ರದ ವ್ಯವಸ್ಥಾಪಕ ಗುಲ್ಷನ್ ಕುಮಾರ್ ಸಿಂಗ್ ಮಾತನಾಡಿ, ಈ ಸೇವಾ ಕೇಂದ್ರ ವಾರದ ಎಲ್ಲ ೭ ದಿನಗಳಲ್ಲೂ ಸೇವೆ ಒದಗಿಸಲಿದೆ. ಹೊಸ ನೊಂದಣಿ , ತಿದ್ದುಪಡಿ ಸೇರಿದಂತೆ ಹಲವು ಸೌಲಭ್ಯಗಳನ್ನು ಜನರು ಪಡೆದುಕೊಳ್ಳಬಹುದು ಎಂದು ತಿಳಿಸಿದರು.

***************

ಭಾರತೀಯ ಚುನಾವಣಾ ಆಯೋಗ ೨೦೨೫ನೇ ಸಾಲಿನ ಮತದಾರರ ಶಿಕ್ಷಣ ಹಾಗೂ ಜಾಗೃತಿಗಾಗಿ ಅತ್ಯುತ್ತಮ ಅಭಿಯಾನ ಪ್ರಶಸ್ತಿಗಾಗಿ ಮಾಧ್ಯಮ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಈ ಪ್ರಶಸ್ತಿಯು ಜಾಗೃತಿಯ ಮೂಲಕ ಮತದಾರರ ಪಾಲ್ಗೊಳ್ಳುವಿಕೆಗಾಗಿ ಅತ್ಯುತ್ತಮ ಕೊಡುಗೆ ನೀಡಿದ ಮಾಧ್ಯಮ ಸಂಸ್ಥೆಗಳನ್ನು ಗುರುತಿಸುವುದಕ್ಕಾಗಿ ನೀಡಲಾಗುತ್ತಿದೆ.

***************

ಬೆಂಗಳೂರು ಓಪನ್ ಟೆನಿಸ್ ಟೂರ್ನಿಯಲ್ಲಿ ಭಾರತದ ಮಾನಸ್ ದಮ್ನೆ ಕ್ರೊಯೇಷಿಯಾದ ಮಾತೇಜ್ ದೋಡಿಗ್ ವಿರುದ್ಧ ೭-೫, ೪-೬, ೬-೧ ಸೆಟ್‌ಗಳ ಅಂತರದಿಂದ ೩೨ರ ಸುತ್ತಿನಲ್ಲಿ ಜಯ ಸಾಧಿಸಿದ್ದಾರೆ.

ಇನ್ನೊಂದು ಪಂದ್ಯದಲ್ಲಿ ಭಾರತದವರೇ ಆದ ಸುಮಿತ್ ನಗಾಲ್ ಹಾಗೂ ಎಸ್.ಡಿ.ಪ್ರಜ್ವಲ್ ದೇವ್ ಸೆಣಸುತ್ತಿದ್ದಾರೆ.

ಅರ್ಹತಾ ಸುತ್ತಿನ ಪಂದ್ಯದಲ್ಲಿ ಭಾರತದ ಸಿದ್ಧಾರ್ಥ ರಾವತ್, ಫ್ರಾನ್ಸ್‌ನ ಅಲೆಕ್ಸಿಸ್ ಗ್ಯಾಟಿಯಾರ್ ಸೋಲುನುಭವಿಸಿದ್ದಾರೆ.

***************

ರಾಜ್ಯ ಸರ್ಕಾರ ಮೆಕ್ಕೆಜೋಳ ಬೆಳೆದ ಎಲ್ಲಾ ರೈತರಿಗೆ ಘೋಷಣೆ ಮಾಡಿರುವ ೨೫೦ ರೂಪಾಯಿ ಪ್ರೋತ್ಸಾಹ ಧನವನ್ನು ನೇರವಾಗಿ ರೈತರ ಖಾತೆಗೆ ಜಮೆಯಾಗುವಂತೆ ನೋಡಿಕೊಳ್ಳಬೇಕು ಎಂದು ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ಗದಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸುವ ಕುರಿತು ಜರುಗಿದ ರೈತ ಮುಖಂಡರುಗಳ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

*******ಮುಕ್ತಾಯ********